**All India Radio: Bangalore**
**Regional Bulletin In Kannada**
**30.09.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.09.2025 / 6.40 p.m.**
**<><><>**

ಮುಖ್ಯಾಂಶಗಳು :

1. ಅತಿವೃಷ್ಟಿಯಿಂದ ಹಾನಿಗೊಳಗಾದ ಜಿಲ್ಲೆಗಳಲ್ಲಿ ಮುಖ್ಯಮಂತ್ರಿ ವೈಮಾನಿಕ ಸಮೀಕ್ಷೆ; ಕಲಬುರಗಿಯಲ್ಲಿ ಪರಿಶೀಲನಾ ಸಭೆ
2. ಬೆಂಗಳೂರಿನ ೫ ಹೊಸ ನಗರಪಾಲಿಕೆ ವಾರ್ಡ್‌ಗಳ ಮರು ವಿಂಗಡಣೆ ಕರಡು ಅಧಿಸೂಚನೆ ಪ್ರಕಟ
3. ಹಿಂದುಳಿದ ಆಯೋಗದ ಸಮೀಕ್ಷೆಯಿಂದ ರಾಜ್ಯದಲ್ಲಿ ಹೊಸ **ಸಮಸ್ಯೆ** ಸೃಷ್ಟಿ : ಕೇಂದ್ರ ಸಚಿವ ಕುಮಾರಸ್ವಾಮಿ ಆರೋಪ
4. ಜಂಬೂಸವಾರಿಯಲ್ಲಿ ಧನಂಜಯ, ನಿಶಾನೆ, ಗೋಪಿ ನೌಪತ್ ಆನೆ ಸಚಿವ ಈಶ್ವರ್ ಖಂಡ್ರೆ ಘೋಷಣೆ
5. ಬೆಂಬಲ ಬೆಲೆ ಯೋಜನೆಯಡಿ ಜಿಲ್ಲಾಡಳಿತಗಳಿಂದ ಸೂರ್ಯಕಾಂತಿ, ಹೆಸರುಕಾಳು, ಸೋಯಾಬಿನ್ ಖರೀದಿ ಪ್ರಕ್ರಿಯೆ ಆರಂಭ

<><><><>

ಪ್ರವಾಹದಿಂದ ತತ್ತರಿಸಿರುವ ಕಲ್ಯಾಣ ಕರ್ನಾಟಕದ ಕಲಬುರ್ಗಿ, ಬೀದರ್, ಯಾದಗಿರಿ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ವೈಮಾನಿಕ ಸಮೀಕ್ಷೆ ನಡೆಸಿದ್ದಾರೆ. ಈ ವೇಳೆ ಸಚಿವರಾದ ಕೃಷ್ಣಬೈರೇಗೌಡ, ಎಂ.ಬಿ.ಪಾಟೀಲ್, ಪ್ರಿಯಾಂಕ್ ಖರ್ಗೆ ಉಪಸ್ಥಿತರಿದ್ದರು. ಭೀಮಾ ಹಾಗೂ ಕೃಷ್ಣಾ ನದಿಗಳಲ್ಲಿ ಉಂಟಾಗಿರುವ ಪ್ರವಾಹ ಕುರಿತಂತೆ ಅವರು ಪರಿಶೀಲನೆ ನಡೆಸಿದ್ದಾರೆ. ಇದಕ್ಕೂ ಮುನ್ನ ಕಲಬುರಗಿ ವಿಮಾನ ನಿಲ್ದಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರವಾಹದಿಂದಾಗಿ ಭೀಮಾ ನದಿ ತೀರದ ಪ್ರದೇಶಗಳಲ್ಲಿ ಉಂಟಾಗಿರುವ ಹಾನಿ ಬಗ್ಗೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಮಾಹಿತಿ ಪಡೆದರು. ನಾಲ್ಕು ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಉಸ್ತುವಾರಿ ಕಾರ್ಯದರ್ಶಿಗಳು ಮಳೆಹಾನಿ ಕುರಿತು ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು. ನಾಲ್ಕು ಜಿಲ್ಲೆಗಳ ವೈಮಾನಿಕ ಸಮೀಕ್ಷೆ ನಂತರ ಮುಖ್ಯಮಂತ್ರಿ, ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮುಖ್ಯಮಂತ್ರಿ ಹಾಗೂ ಸಚಿವರು ಪರಿಶೀಲನಾ ಸಭೆ ನಡೆಸಲಿದ್ದಾರೆ.

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರ -ಜಿಬಿಎ ವ್ಯಾಪ್ತಿಯ ೫ ನಗರ ಪಾಲಿಕೆಗಳ ವಾರ್ಡ್ ಗಳ ಮರುವಿಂಗಡಣೆ ಮಾಡಿ ನಗರಾಭಿವೃದ್ಧಿ ಇಲಾಖೆ ಕರಡು ಅಧಿಸೂಚನೆ ಹೊರಡಿಸಿದೆ. ಬೆಂಗಳೂರು ಕೇಂದ್ರ ನಗರಪಾಲಿಕೆಯಲ್ಲಿ ೬೩ ವಾರ್ಡ್, ದಕ್ಷಿಣ ನಗರ ಪಾಲಿಕೆಯಲ್ಲಿ ೭೨ ವಾರ್ಡ್, ಪೂರ್ವ ನಗರ ಪಾಲಿಕೆಯಲ್ಲಿ ೫೦, ಪಶ್ಚಿಮದಲ್ಲಿ ೧೧೧ ವಾರ್ಡ್ ಹಾಗೂ ಉತ್ತರದಲ್ಲಿ ೭೨ ವಾರ್ಡ್ ಗಳನ್ನು ರಚಿಸಲಾಗಿದೆ. ೫ ನಗರ ಪಾಲಿಕೆಗಳ ವಾರ್ಡ್‌ಗಳ ಮರು ವಿಂಗಡಣೆಗೆ ಜಿಬಿಎ ಮುಖ್ಯ ಆಯುಕ್ತರ ಅಧ್ಯಕ್ಷತೆಯ ವಾರ್ಡ್‌ಗಳ ಪುನರ್ ವಿಂಗಡಣಾ ಆಯೋಗವನ್ನು ರಚಿಸಲಾಗಿತ್ತು.

ಯಾವುದೇ ಆಕ್ಷೇಪ ಸಲಹೆಗಳಿದ್ದರೆ, ಸಾರ್ವಜನಿಕರು ತಮ್ಮ ಪೂರ್ಣ ವಿಳಾಸ ಹಾಗೂ ಸೂಕ್ತ ವಿವರಣೆಗಳೊಂದಿಗೆ ಲಿಖಿತ ರೂಪದಲ್ಲಿ ಸಲ್ಲಿಸಬಹುದು ಎಂದು ನಗರಾಭಿವೃದ್ಧಿ ಇಲಾಖೆ ಅಧಿಸೂಚನೆಯಲ್ಲಿ ತಿಳಿಸಿದೆ.

<><><><>

ಕೇಂದ್ರ ಸರ್ಕಾರದ ಜನಗಣತಿಯಲ್ಲಿ ಭಾಗವಹಿಸಬೇಡಿ ಎಂದು ಜನತೆಗೆ ಕರೆ ನೀಡಬಹುದೇ ಎಂದು ಬಿಜೆಪಿ ನಾಯಕರನ್ನು ಗೃಹಸಚಿವ ಡಾ.ಜಿ.ಪರಮೇಶ್ವರ್ ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ನಾಯಕರು ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಬಹಿಷ್ಕರಿಸಲು ಕರೆ ನೀಡಿರುವ ಕುರಿತಂತೆ ಪ್ರತಿಕ್ರಿಯಿಸಿ, ಬಿಜೆಪಿ ವಾದಕ್ಕೆ ಏನಾದರೂ ಅರ್ಥವಿದೆಯೇ ಎಂದು ಕೇಳಿದ್ದಾರೆ. ಕೇಂದ್ರ ಸರ್ಕಾರ ನಡೆಸುತ್ತಿರುವುದು ರಾಷ್ಟ್ರೀಯ ಜನಗಣತಿಯಾಗಿದ್ದು, ಅದು ದೇಶದ ಜನಸಂಖ್ಯೆಯನ್ನು ಖಚಿತಪಡಿಸಲಿದೆ. ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆಯಿಂದ ರಾಜ್ಯದ ಜನರ ಆರ್ಥಿಕ ಸ್ಥಿತಿಗತಿ ತಿಳಿಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯ ಸರ್ಕಾರ ನಡೆಸುತ್ತಿರುವ ಸಾಮಾಜಿಕ, ಆರ್ಥಿಕ ಸಮೀಕ್ಷೆ ರಾಜ್ಯದಲ್ಲಿ ಹೊಸ ಸಮಸ್ಯೆಗಳಿಗೆ ಕಾರಣವಾಗಲಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಪಕ್ಷಗಳು ಟೀಕಿಸಿದ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವೈಮಾನಿಕ ಸಮೀಕ್ಷೆಯನ್ನು ನಡೆಸುತ್ತಿದ್ದಾರೆ ಎಂದು ಹೇಳಿದ್ದಾರೆ. ಬೆಂಗಳೂರು ನಗರದ ರಸ್ತೆಗಳ ಕಳಪೆ ಸ್ಥಿತಿಯ ಬಗ್ಗೆಯೂ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ದಸರಾ ಹೆಸರಿನಲ್ಲಿ ಕೆಎಸ್ಆರ್‌ಟಿಸಿ ಬಸ್ ಪ್ರಯಾಣ ದರವನ್ನು ಏರಿಸಲಾಗಿದೆ ಎಂದು ದೂರಿದ್ದಾರೆ.

<><><><>

ಈ ಬಾರಿಯ ದಸರಾ ಜಂಬೂಸವಾರಿಯಲ್ಲಿ ಧನಂಜಯ ನಿಶಾನೆ ಆನೆಯ ಕಾರ್ಯ ನಿರ್ವಹಿಸಲಿದ್ದು, ಗೋಪಿ ನೌಪತ್ ಆನೆಯ ಸ್ಥಾನ ಪಡೆದಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಅವರು, ಮಹೇಂದ್ರ, ಶ್ರೀಕಂಠ ಮತ್ತು ಲಕ್ಷ್ಮೀ ಸಾಲಾನೆ ೧ ನೇ ತಂಡದಲ್ಲಿದ್ದರೆ, ಕಂಜನ್, ಭೀಮ, ಏಕಲವ್ಯ ಸಾಲಾನೆ ೨ ರಲ್ಲಿ ಸಾಗಲಿವೆ ಎಂದು ಹೇಳಿದ್ದಾರೆ. ಸಾಲಾನೆ ೩ರ ತಂಡದಲ್ಲಿ ಪ್ರಶಾಂತ್, ಸುಗ್ರೀವ, ಹೇಮಾವತಿ ಇದ್ದರೆ, ಅಂಬಾರಿ ಹೊತ್ತು ಸಾಗುವ ಅಭಿಮನ್ಯುವಿನ ಅಕ್ಕ ಪಕ್ಕದಲ್ಲಿ ಕಾವೇರಿ ಮತ್ತು ರೂಪಾ ಹೆಣ್ಣಾನೆಗಳು ಹೆಜ್ಜೆ ಹಾಕಲಿವೆ ಎಂದು ತಿಳಿಸಿದ್ದಾರೆ.

<><><><>

ಜಿಎಸ್‌ಟಿ ಸರಳೀಕರಣ ಮಾಡುವ ಮೂಲಕ ಭಾರತದ ಆರ್ಥಿಕ ವ್ಯವಸ್ಥೆಗೆ ಹೊಸ ಮಾದರಿಯನ್ನು ಪ್ರಧಾನಿ ಕಲ್ಪಿಸಿದ್ದು ಇದು ವಿಶ್ವಕ್ಕೆ ಮಾದರಿಯಾಗಿದೆ ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅಭಿಪ್ರಾಯಪಟ್ಟಿದ್ದಾರೆ. ತಿಪಟೂರಿನಲ್ಲಿ ನಡೆದ ಜಿಎಸ್ ಟಿ ಬಚತ್ ಉತ್ಸವ್ ಹಾಗೂ ಸ್ವದೇಶಿ ಅಭಿಯಾನದಲ್ಲಿ ಮಾತನಾಡಿದ ಅವರು ಜಿಎಸ್ಟಿ ಸರಳೀಕರಣದಿಂದ ದೇಶದ ನಾಗರಿಕರಿಗೆ ಹೆಚ್ಚಿನ ಉಪಯೋಗವಾಗಿದೆ ಎಂದು ಹೇಳಿದ್ದಾರೆ.

<><><><>

ಪ್ರಸಕ್ತ ಸಾಲಿನ ಕೇಂದ್ರ ಸರಕಾರದ ಬೆಂಬಲ ಬೆಲೆ ಯೋಜನೆಯಡಿ ಬಾಗಲಕೋಟೆಯಲ್ಲಿ ಸೂರ್ಯಕಾಂತಿ, ಹೆಸರು ಕಾಳು ಹಾಗೂ ಸೋಯಾಬಿನ್ ಉತ್ಪನ್ನಗಳ ಖರೀದಿ ಪ್ರಕ್ರಿಯೆ ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಪ್ರಕಟಣೆಯಲ್ಲಿ  ತಿಳಿಸಿದ್ದಾರೆ. ಬೆಂಬಲ ಬೆಲೆ ಯೋಜನೆಯಡಿ ಸೂರ್ಯಕ್ರಾಂತಿ ಪ್ರತಿ ಕ್ವಿಂಟಾಲ್‌ಗೆ ೭ ಸಾವಿರದ ೭೨೧ ರೂಪಾಯಿ ದರದಂತೆ ಗರಿಷ್ಟ ಪ್ರಮಾಣ ೨೦ ಕ್ವಿಂಟಾಲ್ ಖರೀದಿ ಪ್ರಮಾಣ ನಿಗದಿಪಡಿಸಲಾಗಿದೆ. ಹೆಸರುಕಾಳು ಪ್ರತಿ ಕ್ವಿಂಟಲ್‌ಗೆ ೮ ಸಾವಿರದ ೭೬೮ ರೂಪಾಯಿಗಳಂತೆ ಪ್ರತಿ ಎಕರೆಗೆ ೩ ಕ್ವಿಂಟಾಲ್ ನಂತೆ ಗರಿಷ್ಟ ೧೫ ಕ್ವಿಂಟಾಲ್ ಹಾಗೂ ಸೋಯಾಬಿನ್ ಪ್ರತಿ ಕ್ವಿಂಟಾಲ್‌ಗೆ ೫ ಸಾವಿರದ ೩೨೮ ರೂಪಾಯಿಗಳಂತೆ ಪ್ರತಿ ಎಕರೆಗೆ ೫ ಕ್ವಿಂಟಾಲ್‌ನಂತೆ ಗರಿಷ್ಟ ೨೦ ಕ್ವಿಂಟಾಲ್ ಖರೀದಿ ಪ್ರಮಾಣ ನಿಗದಿಪಡಿಸಲಾಗಿದೆ. ಖರೀದಿ ಅವಧಿಯನ್ನು ೯೦ ದಿನಗಳ ವರೆಗೆ ನಿಗದಿಪಡಿಸಲಾಗಿದೆ. ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ೫೧೪ ಹೆಕ್ಟೇರ್ ಕೃಷಿ ಪ್ರದೇಶದಲ್ಲಿ ಹೆಸರು ಬೆಳೆ ಬೆಳೆಯಲಾಗಿದ್ದು, ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬೇಡಿಕೆಗೆ ಅನುಗುಣವಾಗಿ ಖರೀದಿ ಕೇಂದ್ರಗಳನ್ನು ಆರಂಭಿಸುವಂತೆ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಗದಗ ಜಿಲ್ಲೆಯಲ್ಲೂ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ  ಹುಟ್ಟುವಳಿಯನ್ನು ಪ್ರತಿ ಕ್ವಿಂಟಲ್‌ಗೆ ೭ ಸಾವಿರದ ೭೨೧ ರೂಪಾಯಿಯಂತೆ ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದ್ದಾರೆ.

<><><><>

ರಾಜ್ಯದ ವಿವಿಧೆಡೆ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ಮುಂದುವರೆದಿದೆ. ರಾಮನಗರ ಜಿಲ್ಲೆಯಲ್ಲಿ ಕೈಗೊಳ್ಳಲಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯದಲ್ಲಿ  ಬೇಜವಾಬ್ದಾರಿತನ ಹಾಗೂ ನಿರ್ಲಕ್ಷ್ಯ ತೋರಿದ ಹಿನ್ನಲೆಯಲ್ಲಿ ಇಬ್ಬರು ಸಿಬ್ಬಂದಿಯನ್ನು  ಇಲಾಖಾ ವಿಚಾರಣೆ ಕಾಯ್ದಿರಿಸಿ ಜಿಲ್ಲಾಧಿಕಾರಿ  ಯಶವಂತ್ ವಿ. ಗುರುಕರ್ ಆದೇಶ ಹೊರಡಿಸಿದ್ದಾರೆ. ಸಮೀಕ್ಷೆ ವೇಳೆ ಬಳ್ಳಾರಿ ಜಿಲ್ಲೆಯಲ್ಲಿ ಗುರುತಿಸಲಾದ ೩.೮೫ ಲಕ್ಷ ಮನೆಗಳ ಪೈಕಿ ೧.೪೫ ಲಕ್ಷ ಮನೆ ಪೂರ್ಣಗೊಂಡಿದ್ದು, ಶೇಕಡಾ ೩೮ರಷ್ಟು ಈವರೆಗೆ  ಪ್ರಗತಿಯಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ತಿಳಿಸಿದ್ದಾರೆ. ನಿಗದಿತ ಗುರಿ ತಲುಪಲು ಮತ್ತು ಜಿಲ್ಲೆಯನ್ನು ರಾಜ್ಯದಲ್ಲಿಯೇ ಮುಂಚೂಣಿಯಲ್ಲಿರಿಸಲು ಸೂಕ್ತ ತಾಂತ್ರಿಕ ಯೋಜನೆ ರೂಪಿಸಿ ಗಣತಿದಾರರಿಗೆ ಸೂಕ್ತ ಮಾರ್ಗದರ್ಶನ ಮಾಡಬೇಕು ಎಂದು  ಸರ್ವೆ ನೋಡಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕೋಲಾರ ಜಿಲ್ಲೆಯಲ್ಲಿ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಶೇಕಡಾ ೩೫ ರಷ್ಟು ಪೂರ್ಣಗೊಂಡಿದ್ದು, ನಿನ್ನೆ ಒಂದೇ ದಿನ ೩೬ ಸಾವಿರ ಮನೆಗಳನ್ನು ಸಮೀಕ್ಷೆ ನಡೆಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ.

**ಧ್ವನಿ- ಡಾ.ಎಂ.ಆರ್.ರವಿ, ಜಿಲ್ಲಾಧಿಕಾರಿ**

ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಗುಮ್ಮಗೋಳ ಗ್ರಾಮ ಪಂಚಾಯಿತಿ ಕರ ವಸೂಲಿಗಾರ ಶಿವಾನಂದ ಆಚಮಟ್ಟಿ ಅವಧಿಗೂ ಮೊದಲೇ ೯೧ ಮನೆಗಳ ಸಮೀಕ್ಷಾ ಕಾರ್ಯ ಪೂರ್ಣಗೊಳಿಸಿ ಗಮನಸೆಳೆದಿದ್ದಾರೆ.

<><><><>

ಸಾಫ್ಟ್‌ವೇರ್ ಉನ್ನತೀಕರಣದ ಕಾರ್ಯ ಕೈಗೊಂಡಿರುವ ಹಿನ್ನೆಲೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಗ್ರಾಹಕರಿಗೆ ಕಳೆದ ೬ ತಿಂಗಳ ಸರಾಸರಿ ಪರಿಗಣಿಸಿ ಮುಂದಿನ ತಿಂಗಳ ವಿದ್ಯುತ್ ಬಿಲ್ ವಿತರಿಸಲಾಗುವುದು ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ. ಈ ಪ್ರಕ್ರಿಯೆಯಿಂದ ಗೃಹಜ್ಯೋತಿ ಫಲಾನುಭವಿಗಳು ಯೋಜನೆಯ ಲಾಭ ಪಡೆಯುವಲ್ಲಿ ಯಾವುದೇ ವ್ಯತ್ಯಯವಾಗುವುದಿಲ್ಲ ಎಂದು ಬೆಸ್ಕಾಂ ಸ್ಪಷ್ಟಪಡಿಸಿದೆ. ಬೆಸ್ಕಾಂ ಮಿತ್ರ ಆಪ್, ಉಪ ವಿಭಾಗ ಕೇಂದ್ರ, ಯುಪಿಐ ಆಪ್ ಮೂಲಕ ಬಿಲ್ ಪಾವತಿಸಬಹುದಾಗಿದೆ ಎಂದು ಬೆಸ್ಕಾಂ ಸ್ಪಷ್ಟಪಡಿಸಿದೆ.